# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1281 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಪುಟ್ಟಣ್ಣ |
| ಉತ್ತರಿಸಬೇಕಾದ ದಿನಾಂಕ | : | 22.08.2025 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕ್ರೈಸ್ಟ್ ವಸತಿ ಶಾಲೆಗಳ ಖಾಯಂ ಬೋಧಕ ಸಿಬ್ಬಂದಿಗಳಿಗೆ ಕಡಿಮೆ ವೇತನ ಪಾವತಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: (ಬಂದಿದ್ದರೆ ವಿವರ ನೀಡುವುದು) | ಆರ್ಥಿಕ ಇಲಾಖೆಯು ಹುದ್ದೆಗಳನ್ನು ಮಂಜೂರು ಮಾಡುವಾಗ ಹುದ್ದೆಗಳ ಎದುರಾಗಿ ನಿಗಧಿಪಡಿಸಿರುವ ವೇತನ ಶ್ರೇಣಿಯನ್ವಯ ಹಾಗೂ ಕಾಲ ಕಾಲಕ್ಕೆ ವೇತನ ಪರಿಷ್ಕರಣೆಗೆ ಸಂಬಂದಿಸಿದಂತೆ ವೇತನ ಆಯೋಗಗಳು ಸಿಬ್ಬಂದಿಗಳಿಗೆ ನಿಗಧಿಪಡಿಸಿದ ವೇತನ ಶ್ರೇಣಿಯನ್ನು ಸಂಘದ ನೌಕರರಿಗೂ ಪರಿಗಣಿಸಿ ಅದರನ್ವಯ ವೇತನವನ್ನು ಪಾವತಿಸಲಾಗುತ್ತಿದೆ. |
| ಆ) | 2012ರಲ್ಲಿ ನೇಮಕವಾದ ಕ್ರೈಸ್ ಶಾಲೆಗಳ ಶಿಕ್ಷಕರು ಮತ್ತು 2013ರಲ್ಲಿ ನೇಮಕವಾದ ಶಿಕ್ಷಣ ಇಲಾಖೆಯ ನೌಕರರು ಸಮಾನವಾದ ವೇತನ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ಶಿಕ್ಷಣ ಇಲಾಖೆಯ ಅಂದಿನ ಕಾರ್ಯದರ್ಶಿಗಳಾದ ಶ್ರೀ.ಜಿ. ಕುಮಾರ ನಾಯಕ್ ಐ.ಎ.ಎಸ್., ಇವರ ವರದಿಯನ್ವಯ ಸಂಘದ ಶಿಕ್ಷಕರಿಗೂ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಲು ಆರ್ಥಿಕ ಇಲಾಖೆಯ ಅಭಿಪ್ರಾಯ ಕೋರಲಾಗಿ, ಆರ್ಥಿಕ ಇಲಾಖೆಯು ಪ್ರಸ್ತಾವನೆಯನ್ನು ಒಪ್ಪಲು ಬರುವುದಿಲ್ಲವೆಂದು ತಿಳಿಸಿರುತ್ತದೆ.<br><br>ದಿನಾಂಕ:15-04-2016ರ ಸರ್ಕಾರಿ ಆದೇಶ ಸಂಖ್ಯೆ: ಇಡಿ 78 ಎಸ್ಎಲ್‌ಬಿ 2016ರಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ/ ಅನುದಾನಿತ ಪ್ರೌಢಶಾಲಾ ಶಿಕ್ಷಕರುಗಳಿಗೆ ಮತ್ತು ಮುಖ್ಯ ಶಿಕ್ಷಕರುಗಳಿಗೆ ದಿನಾಂಕ:01-06-2016ರಿಂದ ಜಾರಿಗೆ ಬರುವಂತೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಿ ಆದೇಶಿಸಲಾಗಿದೆ. ತದನಂತರದಲ್ಲಿ ಸರ್ಕಾರಿ ಶಿಕ್ಷಕರುಗಳಿಗೆ ಹೆಚ್ಚುವರಿ ವೇತನ ಮಂಜೂರು ಮಾಡುವ ತನ್ನ ನೀತಿಯನ್ನು ಪುನರ್ ಪರಿಶೀಲಿಸಿರುತ್ತದೆ. ಅದರಂತೆ, ದಿನಾಂಕ:20-10-2018 ರ ಸರ್ಕಾರಿ ಆದೇಶ ಸಂಖ್ಯೆ: ಆಇ 28 ಎಸ್ಆರ್‌ಪಿ 2018 ರಲ್ಲಿ ಆದೇಶಗಳನ್ನು ಹೊರಡಿಸಿದ್ದು, ಸದರಿ ಆದೇಶದ ಕಂಡಿಕೆ 4 ರಲ್ಲಿ ಶಿಕ್ಷಣ ಇಲಾಖೆಯ ಶಿಕ್ಷಕರುಗಳಿಗೆ ಮಂಜೂರು ಮಾಡಲಾದ ದಿನಾಂಕ:15.04.2018 ರ ಸರ್ಕಾರಿ ಆದೇಶ ಸಂಖ್ಯೆ:ಇಡಿ 78 ಎಸ್ಎಲ್‌ಬಿ 2016 ಮತ್ತು ಇಡಿ 87 ಡಿಜಿಡಿ 2016 ಗಳನ್ನು ದಿನಾಂಕ:01-08-2018 ರಿಂದ ಜಾರಿಗೆ ಬರುವಂತೆ ರದ್ದುಪಡಿಸಲಾಗಿರುತ್ತದೆ. |
| ಇ) | ಕ್ರೈಸ್ಟ್ ವಸತಿ ಶಾಲೆಗಳ ಶಿಕ್ಷಕರು ಒಂದು ವೇತನ ಬಡ್ತಿಯಷ್ಟು ಕಡಿಮೆ ವೇತನ ಪಡೆಯುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ: (ಕಾರಣಗಳೇನು ವಿವರ ನೀಡುವುದು) | |

| | | |
|---|---|---|
| | | 2018 ರ ಪರಿಷ್ಕೃತ ವೇತನ ಶ್ರೇಣಿ ನಿಯಮಗಳ ಜಾರಿಯಿಂದಾಗಿ ಹಾಗೂ 2012ರ ಪರಿಷ್ಕೃತ ವೇತನ ಶ್ರೇಣಿ ನಿಯಮಗಳು ಮತ್ತು ದಿನಾಂಕ:15-04-2016 ರ ಹೆಚ್ಚುವರಿ ವೇತನ ಬಡ್ತಿ ಮಂಜೂರಾತಿ ಆದೇಶಗಳು ಪ್ರಸ್ತುತ ಅಸ್ತಿತ್ವದಲ್ಲಿ ಇಲ್ಲದಿರುವುದರಿಂದ ಮಾನ್ಯ ನ್ಯಾಯಾಲಯದ ನಿರ್ದೇಶನದಂತೆ ಪ್ರಕರಣವನ್ನು ಪರಿಶೀಲಿಸಿದಾಗ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಬರುವ ವಸತಿ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ ಶಿಕ್ಷಣ ಇಲಾಖೆಯ ಶಿಕ್ಷಕರುಗಳಿಗೆ ನೀಡುತ್ತಿದ್ದ ವೇತನ ಬಡ್ತಿಯನ್ನು ಮಂಜೂರು ಮಾಡಲು ಬರುವುದಿಲ್ಲ.<br>ಆದರೆ, ದಿನಾಂಕ:01-03-2018 ಮತ್ತು ದಿನಾಂಕ: 19-04-2018 ರ ಆದೇಶ ಸಂಖ್ಯೆ: ಆಇ 6 ಎಸ್‌ಆರ್‌ಪಿ 2018 ರನ್ವಯ 2018ರ ಪರಿಷ್ಕೃತ ವೇತನ ಶ್ರೇಣಿ ನಿಯಮಗಳನ್ನು ದಿನಾಂಕ: 01.07.2017 ರಿಂದ ಜಾರಿಗೆ ಬರುವಂತೆ ಅನುಷ್ಠಾನಗೊಳಿಸಲಾಗಿರುತ್ತದೆ. ಅಂದರೆ, 2012 ರ ಪರಿಷ್ಕೃತ ವೇತನ ಶ್ರೇಣಿಯು ದಿನಾಂಕ:01-07-2017 ರಿಂದ ನಿರಶನಗೊಂಡಿರುತ್ತದೆ. ತದನಂತರದಲ್ಲಿ ಸರ್ಕಾರಿ ಶಿಕ್ಷಕರುಗಳಿಗೆ ಹೆಚ್ಚುವರಿ ವೇತನ ಮಂಜೂರು ಮಾಡುವ ಪ್ರಸ್ತಾವನೆಯನ್ನು ಪುನರ್ ಪರಿಶೀಲಿಸಿರುತ್ತದೆ. ಅದರಂತೆ ದಿನಾಂಕ: 20-10-2018 ರ ಸರ್ಕಾರಿ ಶ್ರೇಣಿ ನಿಯಮಗಳನ್ನು ದಿನಾಂಕ:01.07.2017 ರಿಂದ ಜಾರಿಗೆ ಬರುವಂತೆ ಅನುಷ್ಠಾನಗೊಳಿಸಲಾಗಿರುತ್ತದೆ. ಅಂದರೆ, 2012 ರ ಪರಿಷ್ಕೃತ ವೇತನ ಶ್ರೇಣಿಯು ದಿನಾಂಕ:01-07-2017 ರಿಂದ ನಿರಶನಗೊಂಡಿರುತ್ತದೆ. ತದನಂತರದಲ್ಲಿ ಸರ್ಕಾರಿ ಶಿಕ್ಷಕರುಗಳಿಗೆ ಹೆಚ್ಚುವರಿ ವೇತನ ಮಂಜೂರು ಮಾಡುವ ಪ್ರಸ್ತಾವನೆಯನ್ನು ಪುನರ್ ಪರಿಶೀಲಿಸಿರುತ್ತದೆ. ಅದರಂತೆ ದಿನಾಂಕ:20-10-2018 ರ ಸರ್ಕಾರಿ ಆದೇಶ ಸಂಖ್ಯೆ: ಆಇ 28 ಎಸ್ ಆರ್‌ಪಿ 2018 ರಲ್ಲಿ ಆದೇಶಗಳನ್ನು ಹೊರಡಿಸಿದ್ದು, ಸದರಿ ಆದೇಶದ ಕಂಡಿಕೆ 4 ರಲ್ಲಿ ಶಿಕ್ಷಣ ಇಲಾಖೆಯ ಶಿಕ್ಷಕರುಗಳಿಗೆ ಮಂಜೂರು ಮಾಡಲಾದ ದಿನಾಂಕ:15.04.2018 ರ ಸರ್ಕಾರಿ ಆದೇಶ ಸಂಖ್ಯೆ:ಇಡಿ 78 ಎಸ್‌ಎಲ್‌ಬಿ 2016 ಮತ್ತು ಇಡಿ 87 ಡಿಜಿಡಿ 2016 ಗಳನ್ನು ದಿನಾಂಕ:01-08-2018 ರಿಂದ ಜಾರಿಗೆ ಬರುವಂತೆ ರದ್ದುಪಡಿಸಲಾಗಿರುತ್ತದೆ.<br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಬರುವ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರುಗಳು ಮತ್ತು ಶಿಕ್ಷಣ ಇಲಾಖೆಯ ಶಿಕ್ಷಕರುಗಳ ಹುದ್ದೆಗಳನ್ನು ಪರಸ್ಪರ ಹೋಲಿಸಲು ಬರುವುದಿಲ್ಲ. ಬಡ್ತಿಯನ್ನು 2012 ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ಮಂಜೂರು ಮಾಡಿ ಆದೇಶ ಹೊರಡಿಸಿರುತ್ತದೆ. |

| | | |
|---|---|---|
| ಈ) | ಈ ವೇತನ ತಾರತಮ್ಯವನ್ನು ಸಮಾಜ ಕಲ್ಯಾಣ ಇಲಾಖೆ ಯಾವ ಕಾಲಮಿತಿಯಲ್ಲಿ ಸರಿಪಡಿಸಲಾಗುವುದು? (ವಿವರ ನೀಡುವುದು) | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಶಿಕ್ಷಕರಿಗೆ ಒಂದು ಹೆಚ್ಚುವರಿ ವೇತನ ಬಡ್ತಿ ನೀಡಲು ಶಿಫಾರಸ್ಸು ಮಾಡುವಂತೆ 7ನೇ ವೇತನ ಆಯೋಗಕ್ಕೆ ಸಲ್ಲಿಸಲಾದ ಪ್ರಸ್ತಾವನೆಯನ್ನು ಪರಿಗಣಿಸಿರುವುದಿಲ್ಲ. |

ಸಕಇ 200 ಎಂಡಿಎಸ್ 2025

(ಡಾ.ಹೆಚ್.ಸಿ ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು.